# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | **458 (493)** |
| **ಸದಸ್ಯರ ಹೆಸರು** | | **ಶ್ರೀ ಕೆ.ಎ. ತಿಪ್ಪೆಸ್ವಾಮಿ (ನಾಮನಿರ್ದೇಶನ ಹೊಂದಿದವರು)** |
| **ಉತ್ತರಿಸಬೇಕಾದ ದಿನಾಂಕ** | | **19-02-2024** |
| **ಉತ್ತರಿಸಬೇಕಾದ ಸಚಿವರು** | | **ಉನ್ನತ ಶಿಕ್ಷಣ ಸಚಿವರು** |
| **ಪ್ರಶ್ನೆ** | | **ಉತ್ತರ** |
| ಅ) | ರಾಜ್ಯದಲ್ಲಿ ಉನ್ನತ ಶಿಕ್ಷಣಕ್ಕೆ ಕಾಲೇಜುಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳ ನಿವ್ವಳ ದಾಖಲಾತಿ ಅನುಪಾತ (Gross Enrollment Ratio – GER) ನೆರೆ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ಗಣನೀಯವಾಗಿ ಇಳಿಮುಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಳೆದ 05 ವರ್ಷಗಳ All India Survey of Higher Education (AISHE) 2021-22 ರ ವರದಿಯ ಅನುಸಾರ ರಾಜ್ಯದಲ್ಲಿ ಉನ್ನತ ಶಿಕ್ಷಣಕ್ಕೆ ದಾಖಲಾಗಿರುವ ವಿದ್ಯಾರ್ಥಿಗಳ ನಿವ್ವಳ ದಾಖಲಾತಿ ಅನುಪಾತವು (Gross Enrollment Ratio – GER) ನೆರೆ ರಾಜ್ಯಗಳಿಗೆ ಹೋಲಿಸಿದ್ದಲ್ಲಿ ಕಡಿಮೆ ಇದ್ದರೂ ವರ್ಷದಿಂದ ವರ್ಷಕ್ಕೆ ಏರಿಕೆಯಾಗಿರುತ್ತದೆ. ಈ ಏರಿಕೆಯು ರಾಷ್ಟ್ರೀಯ ಜಿಇಆರ್ ಹೋಲಿಸಿದಲ್ಲಿ ಹೆಚ್ಚಾಗಿರುತ್ತದೆ (2021-22 ನೇ ಸಾಲಿಗೆ ರಾಷ್ಟ್ರೀಯ ಜಿಇಆರ್ 27.3 ರಾಜ್ಯ 36.0). |
| ಆ) | ಹಾಗಿದ್ದಲ್ಲಿ, ವಿದ್ಯಾರ್ಥಿಗಳ ನಿವ್ವಳ ದಾಖಲಾತಿ ಅನುಪಾತ ಹೆಚ್ಚಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೂಪಿಸಿ, ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು; ಮತ್ತು ಅವುಗಳ ಅನುಷ್ಠಾನ ಯಾವ ಹಂತದಲ್ಲಿವೆ; (ಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಪ್ರಸ್ತುತ ಅಸ್ತಿತ್ವದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಪೂರ್ಣ ಪ್ರಮಾಣದಲ್ಲಿ ಅಗತ್ಯ ಶೈಕ್ಷಣಿಕ ಮೂಲಭೂತ ಸೌಕರ್ಯ, ಕಟ್ಟಡ ಮೂಲಭೂತ ಸೌಕರ್ಯ ಒದಗಿಸಲು ಕ್ರಮವಹಿಸಲಾಗುತ್ತಿದೆ.<br><br>ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿವಿಧ ವಿದ್ಯಾರ್ಥಿವೇತನಗಳನ್ನು ನೀಡಲಾಗುತ್ತಿದ್ದು, ಹೆಣ್ಣು ಮಕ್ಕಳಿಗೆ ಪೂರ್ಣ ಶುಲ್ಕ ಮರುಪಾವತಿ ಯೋಜನೆಯು ಜಾರಿಯಲ್ಲಿದ್ದು, ಇದರಿಂದ ಉನ್ನತ ಶಿಕ್ಷಣದಲ್ಲಿ ಮಹಿಳೆಯರ ಭಾಗವಹಿಸುವಿಕೆ ಮತ್ತು ನಿವ್ವಳ ದಾಖಲಾತಿ ಅನುಪಾತದ ಹೆಚ್ಚಳಕ್ಕೆ ಪ್ರೋತ್ಸಾಹಕರ ಕ್ರಮವಾಗಿರುತ್ತದೆ.<br><br>ಉದ್ಯೋಗದಲ್ಲಿ ತೊಡಗಿರುವಂತಹ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಈಗಾಗಲೇ ಚಾಲ್ತಿಯಲ್ಲಿರುವ ಸರ್ಕಾರಿ ಕಾಲೇಜುಗಳಲ್ಲಿನ ಮೂಲಭೂತ ಸೌಕರ್ಯಗಳನ್ನು ಬಳಸಿಕೊಂಡು, ಸರ್ಕಾರ / ಇಲಾಖೆಗೆ ಯಾವುದೇ ಆರ್ಥಿಕ ಹೊರೆಯಾಗದಂತೆ, 11 ಸಂಜೆ ಕಾಲೇಜುಗಳನ್ನು ಪ್ರಾರಂಭಿಸಲಾಗಿರುತ್ತದೆ.<br><br>ರಾಜ್ಯದಲ್ಲಿ ಪದವಿ ವಿದ್ಯಾರ್ಥಿಗಳಿಗೆ LMS (ಕಲಿಕಾ ನಿರ್ವಹಣಾ ವ್ಯವಸ್ಥೆ) ಆಧಾರಿತ ಡಿಜಿಟಲ್ ಕಲಿಕೆಯು ವಿಷಯ ಸಂವಹನ, ಲಭ್ಯತೆ ಮತ್ತು ಮೌಲ್ಯಮಾಪನಗಳಲ್ಲಿ ಪರಿವರ್ತಕ ಬದಲಾವಣೆಗಳನ್ನು ತರುವ ಮೂಲಕ ಬೋಧನೆ – ಕಲಿಕೆಗಳಲ್ಲಿ ಕ್ರಾಂತಿ ಮೂಡಿಸುವ ಸಮಗ್ರ ವೇದಿಕೆಯಾಗಿದೆ. ಇದು ಅಧ್ಯಾಪಕರನ್ನು ಸಶಕ್ತಗೊಳಿಸುವ, ವಿದ್ಯಾರ್ಥಿಗಳನ್ನು ಸಮೃದ್ಧಗೊಳಿಸುವ ಮೂಲಕ ಆಧುನಿಕ ಬೋಧನಾ |
| ಇ) | ರಾಜ್ಯದಲ್ಲಿ ಉನ್ನತ ಶಿಕ್ಷಣದಲ್ಲಿ ದಾಖಲಾತಿ ಹೆಚ್ಚಿಸಲು ಕೇಂದ್ರ – ರಾಜ್ಯ ಸರ್ಕಾರಗಳು ನೀಡುತ್ತಿರುವ ಉತ್ತೇಜನ ರೂಪಕ್ಕೆ ಅಂಶಗಳು (Incentives) ಯಾವುವು? (ಪೂರ್ಣ ಮಾಹಿತಿ ನೀಡುವುದು) | |

| | | |
|---|---|---|
| | | ಕಲಿಕೆಗಳಿಂದ ಉನ್ನತ ಶಿಕ್ಷಣದತ್ತ ವಿದ್ಯಾರ್ಥಿಗಳನ್ನು ಆಕರ್ಷಿಸುವ ಕ್ರಮವಾಗಿರುತ್ತದೆ.<br><br>1. ವಿದ್ಯಾರ್ಥಿಗಳ ಉದ್ಯೋಗಾರ್ಹತೆಯನ್ನು ಹೆಚ್ಚಿಸಲು ಇಲಾಖೆಯ ಹಂತದಲ್ಲಿ ಮತ್ತು ಪ್ರತಿ ಸರ್ಕಾರಿ ಕಾಲೇಜುಗಳಲ್ಲಿ "ಪ್ಲೇಸ್‌ಮೆಂಟ್ ಸೆಲ್" ಗಳಿದ್ದು, ಕೈಗಾರಿಕೆಗಳ ನೆರವಿನೊಂದಿಗೆ ಅಲ್ಪಾವಧಿ ಕೌಶಲ್ಯಾಭಿವೃದ್ಧಿ ಕೋರ್ಸುಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>2. ಇಲಾಖೆಯ ಹಂತದಲ್ಲಿ "ಸ್ಪರ್ಧಾತ್ಮಕ ಪರೀಕ್ಷಾ ಕೋಶ" ಇದ್ದು, ಸರ್ಕಾರಿ ಉದ್ಯೋಗಗಳಿಗಾಗಿ ನಡೆಸಲಾಗುವ ಸಿಇಟಿ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತಿದೆ.<br><br>ಸರ್ಕಾರಿ ಕಾಲೇಜುಗಳಲ್ಲಿ 2023-24 ನೇ ಸಾಲಿನಿಂದ ಅನ್ವಯವಾಗುವಂತೆ, ವಿದ್ಯಾರ್ಥಿಗಳ ಹಾಗೂ ಪೋಷಕರ ಕೋರಿಕೆಯಂತೆ, ಮಾರುಕಟ್ಟೆಯಲ್ಲಿ ಬೇಡಿಕೆಯಿರುವ ಕೋರ್ಸ್‌ಗಳನ್ನು ಪರಿಚಯಿಸಲಾಗಿದೆ. |

ಇಡಿ 44 ಡಿಸಿಇ 2024 (ಇ)

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು